ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: [illegible] ದಿನಾಂಕ : DATE: 7/2/20

# ಸಂಪುಟಕ್ಕೆ 10 ವಲಸಿಗರ ಸೇರ್ಪಡೆ

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು



ಕಾಂಗ್ರೆಸ್ ಮತ್ತು ಜೆಡಿಎಸ್ ತೊರೆದು ರಾಜ್ಯದಲ್ಲಿ ಬಿಜೆಪಿ ಅಧಿಕಾರ ಸೂತ್ರ ಹಿಡಿಯಲು ಕಾರಣೀಭೂತರಾಗಿದ್ದ ಶಾಸಕರುಗಳಿಗೆ ಕೊನೆಗೂ ಸಚಿವರಾಗುವ ಭಾಗ್ಯ ಕೂಡಿಬಂದಿದ್ದು, ಗುರುವಾರ 10 ಮಂದಿ ನೂತನ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದರು.

ರಾಜಭವನದಲ್ಲಿ ನಡೆದ ಸರಳ ಸಮಾರಂಭದಲ್ಲಿ ರಾಜ್ಯಪಾಲ ವಜುಭಾಯಿ ವಾಲಾ ಅವರು ನೂತನ ಸಚಿವರಿಗೆ ಪ್ರತಿಜ್ಞಾ ವಿಧಿ ಬೋಧಿಸಿದರು. ಕಾಂಗ್ರೆಸ್ ಹಾಗೂ ಜೆಡಿಎಸ್ ತೊರೆದು ಅನರ್ಹಗೊಂಡಿದ್ದ 17 ಮಂದಿ ಶಾಸಕರ ಪೈಕಿ, ಉಪ ಚುನಾವಣೆಯಲ್ಲಿ ಜಯಗಳಿಸಿದ್ದ 11 ಮಂದಿ ಶಾಸಕರಲ್ಲಿ 10 ಮಂದಿ ಮುಖ್ಯಮಂತ್ರಿ ಯಡಿಯೂರಪ್ಪರವರ ಸಮ್ಮುಖದಲ್ಲಿ ಪ್ರಮಾಣ ವಚನ ಸ್ವೀಕರಿಸಿದರು.

ಡಿ. 5 ರಂದು ನಡೆದಿದ್ದ ಉಪ ಚುನಾವಣೆಯಲ್ಲಿ ಜಯಗಳಿಸಿದ 11 ಮಂದಿ ಶಾಸಕರ ಪೈಕಿ, 10 ಮಂದಿ 2 ತಿಂಗಳ ನಂತರ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಶಾಸಕ ಮಹೇಶ್ ಕುಮಟಳ್ಳಿ ಸೇರಿದಂತೆ, ಸಚಿವ ಸ್ಥಾನದ ಮೇಲೆ ಕಣ್ಣಿಟ್ಟಿದ್ದ ಕೆಲ ಶಾಸಕರಿಗೆ ಭಾರಿ ನಿರಾಸೆಯಾಗಿದೆ. ಸಚಿವಾಕಾಂಕ್ಷಿಯಾಗಿದ್ದ ಉಮೇಶ್ ಕತ್ತಿ, ಅರವಿಂದ ಲಿಂಬಾವಳಿ ಮತ್ತು ಸಿ.ಪಿ. ಯೋಗೇಶ್ವರ್ ಅವರಿಗೆ ಕೈಗೆ ಬಂದ ತುತ್ತು ಬಾಯಿಗೆ ಬರದಂತಾಗಿದೆ.

**ಎರಡನೇ ಬಾರಿ ಸಂಪುಟ ವಿಸ್ತರಣೆ;** ಜುಲೈ 26 ರಂದು ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿ, ಅಧಿಕಾರ ಸೂತ್ರ ಹಿಡಿದಿದ್ದ ಬಿ.ಎಸ್.ಯಡಿಯೂರಪ್ಪ ಅವರು ಎರಡನೇ ಬಾರಿಗೆ ಸಂಪುಟ ವಿಸ್ತರಣೆ ಮಾಡಿದ್ದಾರೆ. ಸಚಿವ ಸಂಪುಟದ ಗಾತ್ರ ಈಗ 28ಕ್ಕೆ ಏರಿದ್ದು, ಮುಖ್ಯಮಂತ್ರಿ ಸೇರಿದಂತೆ ಈಗ ಸಚಿವ ಸಂಪುಟದಲ್ಲಿ 28 ಮಂದಿ ಸಚಿವರಿದ್ದು, ಇನ್ನು 6 ಸ್ಥಾನಗಳು ಮಾತ್ರ ಖಾಲಿ ಉಳಿದಿವೆ.

**ಕನ್ನಡದಲ್ಲಿ ಪ್ರಮಾಣ ವಚನ ಸ್ವೀಕಾರ:** ಪ್ರತಿಜ್ಞಾವಿಧಿ ಸಮಾರಂಭದಲ್ಲಿ ಮೊದಲಿಗೆ ಎಸ್.ಟಿ ಸೋಮಶೇಖರ್ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದರು. ನಂತರ ಉಳಿದ ಸಚಿವರ ಪ್ರಮಾಣವಚನ ನಡೆಯಿತು. ಬಿ.ಸಿ. ಪಾಟೀಲ್, ಶಿವರಾಂ ಹೆಬ್ಬಾರ್ ಹೊರತುಪಡಿಸಿ ಉಳಿದೆಲ್ಲ ಸಚಿವರು ದೇವರ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿದರೆ, ಬಿ.ಸಿ ಪಾಟೀಲ್, ತಂದೆ-ತಾಯಿ, ಕ್ಷೇತ್ರದ ಜನತೆ ಮತ್ತು ಜಗಜ್ಯೋತಿ ಬಸವೇಶ್ವರರ ಹೆಸರಿನಲ್ಲಿ ಮತ್ತು ಶಿವರಾಂ ಹೆಬ್ಬಾರ್ ತಂದೆ-ತಾಯಿ, ಕ್ಷೇತ್ರದ ಜನತೆ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿದರು. ಎಲ್ಲಾ 10 ಸಚಿವರು ಕನ್ನಡದಲ್ಲಿಯೇ ಪ್ರಮಾಣ ವಚನ ಸ್ವೀಕರಿಸಿದರು.

**ಯಡಿಯೂರಪ್ಪ ಕಾಲಿಗೆ ಎರಗಿದ ಸಚಿವರು:** ಪ್ರಮಾಣವಚನ ಸ್ವೀಕರಿಸಿದ ಸಚಿವರಲ್ಲಿ ರಮೇಶ್ ಜಾರಕಿಹೊಳಿ ಹೊರತುಪಡಿಸಿ ಉಳಿದೆಲ್ಲ ಸಚಿವರು ಮುಖ್ಯಮಂತ್ರಿ ಯಡಿಯೂರಪ್ಪನವರ ಕಾಲು ಮುಟ್ಟಿ ನಮಸ್ಕರಿಸಿದರು. ರಮೇಶ್ ಜಾರಕಿಹೊಳಿ ಮಾತ್ರ ಮುಖ್ಯಮಂತ್ರಿಗಳ ಕೈ ಕುಲುಕಿ ಧನ್ಯವಾದ ಹೇಳಿದರು.

ಇನ್ನು ಎಸ್.ಟಿ ಸೋಮಶೇಖರ್ ಅವರು ಪ್ರಮಾಣ ವಚನ ಸ್ವೀಕರಿಸಿ ಸಹಿ ಮಾಡುವ ಮುಂಚಿತವಾಗಿಯೇ ಯಡಿಯೂರಪ್ಪ ಅವರ ಕಾಲಿಗೆ ಎರಗಿದರು. ಈ ವೇಳೆ ರಾಜ್ಯಪಾಲರು ಮೊದಲು ಸಹಿ ಮಾಡಿ ಎಂದು ಸೂಚಿಸಿದರು.

**ಸಚಿವಾಕಾಂಕ್ಷಿಗಳು ಸೇರಿ ಹಲವರ ಗೈರು:** ಪ್ರಮಾಣ ವಚನ ಸ್ವೀಕಾರ ಸಮಾರಂಭಕ್ಕೆ ಸಚಿವಾಕಾಂಕ್ಷಿ ಉಮೇಶ್ ಕತ್ತಿ, ಸಿ.ಪಿ. ಯೋಗೇಶ್ವರ್ ಹಾಗೂ ಕೆ.ಎಸ್. ಈಶ್ವರಪ್ಪ, ಶ್ರೀರಾಮುಲು ಸೇರಿದಂತೆ ಕೆಲ ಸಚಿವರು ಗೈರುಹಾಜರಾಗಿದ್ದರು. ಪ್ರಮಾಣವಚನ ಸಮಾರಂಭದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ನಳೀನ್ ಕುಮಾರ್ ಕಟೀಲು ಉಪ ಚುನಾವಣೆಯಲ್ಲಿ ಸೋತ ಎಚ್. ವಿಶ್ವನಾಥ್ ಸೇರಿದಂತೆ ಹಲವು ಮುಖಂಡರು ಪಾಲ್ಗೊಂಡಿದ್ದರಾದರೂ ಸಚಿವ ಸ್ಥಾನದ ಮೇಲೆ ಕಣ್ಣಿಟ್ಟಿದ್ದ ಬಿಜೆಪಿಯ ಮೂಲ ಶಾಸಕರಲ್ಲಿ ಬಹುತೇಕ ಮಂದಿ ಗೈರುಹಾಜರಾಗಿದ್ದು, ಕೇವಲ 30 ಶಾಸಕರಷ್ಟೇ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

**ಮೊದಲ ಬಾರಿಗೆ ಸಚಿವರಾದ 8 ಶಾಸಕರು:** ಎಸ್.ಟಿ ಸೋಮಶೇಖರ್, ಡಾ. ಕೆ ಸುಧಾಕರ್, ಬೈರತಿ ಬಸವರಾಜ್, ಶಿವರಾಂ ಹೆಬ್ಬಾರ್, ಬಿ.ಸಿ ಪಾಟೀಲ್, ಕೆ ಗೋಪಾಲಯ್ಯ, ಎಂ ಸಿ ನಾರಾಯಣಗೌಡ ಹಾಗೂ ಶ್ರೀಮಂತ ಪಾಟೀಲ್ ಅವರು ಪ್ರಪ್ರಥಮ ಬಾರಿಗೆ ರಾಜ್ಯ ಸಚಿವ ಸಂಪುಟವನ್ನು ಪ್ರವೇಶಿಸಿದ್ದಾರೆ. ಆನಂದ್ ಸಿಂಗ್ ಮತ್ತು ರಮೇಶ್ ಜಾರಕಿಹೊಳಿ ಅವರು ಈ ಮುನ್ನ ಸಚಿವರಾಗಿ ಸೇವೆ ಸಲ್ಲಿಸಿದ ಅನುಭವ ಹೊಂದಿದ್ದಾರೆ.

## ಶನಿವಾರದೊಳಗೆ ಖಾತೆ ಹಂಚಿಕೆ

**ಪ್ರಮಾಣವಚನ ಸ್ವೀಕರಿಸಿದ ಸಚಿವರಿಗೆ ಫೆ. 8ರೊಳಗೆ ಖಾತೆ ಹಂಚಿಕೆ ಮಾಡಲಾಗುವುದು ಎಂದು ಸಿಎಂ ಬಿ.ಎಸ್. ಯಡಿಯೂರಪ್ಪ ತಿಳಿಸಿದ್ದಾರೆ. ಖಾತೆ ಹಂಚಿಕೆ ಕುರಿತಂತೆ ದೆಹಲಿಗೆ ತೆರಳುತ್ತಿದ್ದು, ಭೇಟಿ ದಿನಾಂಕ ಶೀಘ್ರ ಅಂತಿಮಗೊಳಿಸಲಾಗುವುದು. ದೆಹಲಿ ಭೇಟಿ ವೇಳೆ ಸಚಿವ ಸಂಪುಟದಲ್ಲಿ ಮೂರು ಸಚಿವ ಸ್ಥಾನಗಳನ್ನು ಬಿಜೆಪಿ ಶಾಸಕರಿಗೆ ನೀಡುವ ಕುರಿತು ಕೇಂದ್ರ ನಾಯಕರ ಜತೆ ಚರ್ಚೆ ನಡೆಸಲಾಗುವುದು. ಎಂಟು ಬಾರಿ ಆಯ್ಕೆಯಾಗಿರುವ ಬಿಜೆಪಿ ಶಾಸಕ ಉಮೇಶ್ ಕತ್ತಿ ಅವರನ್ನು ಸಂಪುಟಕ್ಕೆ ಸೇರಿಸಿಕೊಳ್ಳಲಾಗುವುದು ಎಂದರು.**

## ವಿಸ್ತರಣೆ ಹೈಲೈಟ್ಸ್

- **ಸೋಮಶೇಖರ್ ಪ್ರಮಾಣ ಸ್ವೀಕಾರಕ್ಕೆ ತೆರಳುವ ವೇಳೆ ಅಡ್ಡ ಬಂದ ಬೆಕ್ಕು**
- **ಶ್ರೀಮಂತ ಪಾಟೀಲ್ ಸಹಿ ಮಾಡುವ ವೇಳೆ ಮುರಿದ ಪೆನ್ನಿನ ನಿಬ್**
- **ವಿಶ್ವನಾಥ್ ಕಡೆಗೆ ತಿರುಗಿನೋಡದ ನೂತನ ಸಚಿವರು ಅರ್ಧದಲ್ಲಿಯೇ ಹೊರನಡೆದ ಎಚ್.ವಿಶ್ವನಾಥ್**
- **ಸಚಿವರಾಗುವ ಮೊದಲೇ ಪೊಲೀಸರ ಮೇಲೆ ಜಾರಕಿಹೊಳಿ ದರ್ಪ ಒನ್ ವೇನಲ್ಲಿ ಕಾರು ಬಿಡದ ಕಾರಣಕ್ಕೆ ಗರಂ**
- **ಕಾರಿನಿಂದಿಳಿದು ನಡೆದೇ ವೇದಿಕೆಗೆ ತೆರಳಿದ ಸಾಹುಕಾರ**
- **ಮೊದಲ ಬಾರಿಗೆ ಸಚಿವರಾದ ಎಂಟು ಶಾಸಕರು**

## ನೂತನ ಸಚಿವರು

**ಎಸ್.ಟಿ.ಸೋಮಶೇಖರ್, ರಮೇಶ್ ಜಾರಕಿಹೊಳಿ, ಆನಂದ್ ಸಿಂಗ್, ಡಾ. ಕೆ.ಸುಧಾಕರ್, ಬಿ.ಎ.ಬಸವರಾಜು, ಶಿವರಾಂ ಹೆಬ್ಬಾರ್, ಬಿ.ಸಿ.ಪಾಟೀಲ್, ಕೆ. ಗೋಪಾಲಯ್ಯ, ನಾರಾಯಣ ಗೌಡ, ಶ್ರೀಮಂತ ಪಾಟೀಲ್**